# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **574** |
| **ಸದಸ್ಯರ ಹೆಸರು** | : | **ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | : | **14.08.2025** |
| **ಉತ್ತರಿಸಬೇಕಾದ ಸಚಿವರು** | : | **ಉಪ ಮುಖ್ಯಮಂತ್ರಿಯವರು** |

*******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಪಿ.ಆರ್.ಆರ್-2 ಯೋಜನೆ ವಿಳಂಬವಾಗಲು ಕಾರಣವೇನು ಮತ್ತು ಅದು ಅಂತಿಮವಾಗಿ ಯಾವಾಗ ಪ್ರಾರಂಭವಾಗುತ್ತಿದೆ; | ಪಿ.ಆರ್.ಆರ್-2ರ ಯೋಜನೆಗೆ ಸಂಬಂಧಿಸಿದಂತೆ ಪ್ರಾಥಮಿಕ ಅಧಿಸೂಚನೆಯನ್ನು ದಿನಾಂಕ:12.12.2005 ಮತ್ತು 15.11.2006 ರಂದು ಹೊರಡಿಸಲಾಗಿದ್ದು, ಸದರಿ ರಸ್ತೆಯನ್ನು ನಿರ್ಮಾಣ ಮಾಡುವ ಸಂಬಂಧ ಜಂಟಿ ಅಳತೆ ಸಮೀಕ್ಷೆ (ಜೆ.ಎಂ.ಸಿ) ಕಾರ್ಯ ಪ್ರಗತಿಯಲ್ಲಿರುತ್ತದೆ. |
| ಆ | 2006ರಲ್ಲಿ ಬಿ.ಡಿ.ಎ ಅಧಿಸೂಚನೆ ಹೊರಡಿಸಿ, 30 ದಿನದೊಳಗೆ ಸೂಕ್ತ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಲು ಸೂಚಿಸಿದ್ದು, ಯಾವುದೇ ಕ್ರಮಕೈಗೊಳ್ಳದಿರಲು ಕಾರಣವೇನು; | |
| ಇ | ಪೆರಿಫೆರಲ್ ವರ್ತುಲ ರಸ್ತೆ ನಿರ್ಮಾಣ ಸಂಬಂಧ ಬಿ.ಡಿ.ಎ ಸುಮಾರು 4 ಸಾವಿರ ರೈತರಿಗೆ ನೋಟೀಸ್ ನೀಡಿದ್ದು, ಭೂಮಿ ಬಿಟ್ಟು ಕೊಟ್ಟು ಪರಿಹಾರ ಪಡೆಯಲು ಒಪ್ಪಿಗೆ ಸೂಚಿಸುವಂತೆ ರೈತರಲ್ಲಿ ವಿನಂತಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು) | ಮಾಗಡಿ ರಸ್ತೆಯಿಂದ ಮೈಸೂರು ರಸ್ತೆವರೆಗಿನ ಮೇಜರ್ ಆರ್ಟೀರಿಯಲ್ ವರ್ತುಲ (ಎಂ.ಎ.ಆರ್) ರಸ್ತೆಗೆ ಒಟ್ಟು 321 ಎಕರೆ 10 ಗುಂಟೆ ವಿಸ್ತೀರ್ಣದ ಜಮೀನಿಗೆ ದಿನಾಂಕ:27.07.2011 ರಂದು ಅಂತಿಮ ಅಧಿಸೂಚನೆ ಹೊರಡಿಸಲಾಗಿದ್ದು, ಸದರಿ ಜಮೀನುಗಳನ್ನು ಹೊರತುಪಡಿಸಿ, ಉಳಿದ ಯಾವುದೇ ಜಮೀನಿನ ಭೂಮಾಲೀಕರಿಗೆ ಪರಿಹಾರ ಪಡೆಯಲು ನೋಟೀಸ್ ಜಾರಿ ಮಾಡಿರುವುದಿಲ್ಲ. |
| ಈ) | ಸದರಿ ನೋಟೀಸ್‌ಗೆ ರೈತರು ನೀಡಿರುವ ಉತ್ತರವೇನು; ಪಿ.ಆರ್.ಆರ್-2 ರಸ್ತೆ ಹಾದುಹೋಗುವ ಮಾರ್ಗದಲ್ಲಿ ಪ್ರತಿ ಎಕರೆಗೆ ಹೊಸ ದರ ನೀಡಬೇಕು; ಇಲ್ಲವೇ ಯೋಜನೆ ಕೈಬಿಡಬೇಕು ಎಂದು ರೈತರು ನೋಟೀಸ್ ಉತ್ತರ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಪಿ.ಆರ್.ಆರ್-2ರ ಯೋಜನೆಗೆ ಸಂಬಂಧಿಸಿದಂತೆ ಸ್ವೀಕೃತವಾಗಿರುವ ಆಕ್ಷೇಪಣೆಗಳಲ್ಲಿ, ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರದ ಹಕ್ಕು, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕಾಯ್ದೆ 2013 ರಡಿ ಪರಿಹಾರ ನೀಡುವಂತೆ ಮತ್ತು ಕೆಲವು ಭೂಮಾಲೀಕರು ಜಮೀನುಗಳನ್ನು ಭೂಸ್ವಾಧೀನದಿಂದ ಕೈಬಿಡುವಂತೆ ಕೋರಿರುತ್ತಾರೆ.<br><br>ಪಿ.ಆರ್.ಆರ್-2 ರಸ್ತೆಯ ಯೋಜನೆಗೆ ಭೂಸ್ವಾಧೀನವಾಗುವ ಜಮೀನಿಗೆ ಭೂಮಾಲೀಕರು ಒಪ್ಪಿದಲ್ಲಿ ಅಭಿವೃದ್ಧಿಪಡಿಸಿದ ನಿವೇಶನ ಅಥವಾ ನಗದು ಪರಿಹಾರ ನೀಡಲು ತೀರ್ಮಾನಿಸಲಾಗಿದೆ. |

**ಸಂಖ್ಯೆ**: ನಅಇ 530 ಬೆಂಭೂಸ್ವಾ 2025

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ